# ಕರ್ನಾಟಕ ವಿಧಾನ ಪರಿಷತ್ತು
## 153ನೇ ಅಧಿವೇಶನ

| | | |
|---|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | : | **865** |
| **ಸದಸ್ಯರ ಹೆಸರು** | : | **ಶ್ರೀ ದಿನೇಶ್ ಗೂಳಿಗೌಡ** |
| | | **(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)** |
| **ಉತ್ತರಿಸುವ ದಿನಾಂಕ** | : | **24-07-2024** |
| **ಉತ್ತರಿಸುವ ಸಚಿವರು** | : | **ಲೋಕೋಪಯೋಗಿ ಸಚಿವರು** |

<table>
<tr><th>ಕ್ರ. ಸಂ</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ)</td><td>2022-2023ನೇ ಸಾಲಿನಲ್ಲಿ ಸರ್ಕಾರ ಯಾವ ಯಾವ ಕಾಮಗಾರಿಗಳನ್ನು ಮಂಜೂರು ಮಾಡಿ ಅನುಮೋದನೆ ನೀಡಿದೆ: (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)</td><td>2022-23ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಯಿಂದ ಈ ಕೆಳಕಂಡ ಯೋಜನೆಗಳಡಿ ಕಾಮಗಾರಿಗಳನ್ನು ಮಂಜೂರು ಮಾಡಲಾಗಿರುತ್ತದೆ.<br><br>(ರೂ.ಕೋಟಿಗಳಲ್ಲಿ)
<table>
<tr><th>ಕ್ರ. ಸಂ</th><th>ಯೋಜನೆ</th><th>ಅಂದಾಜು ಮೊತ್ತ</th></tr>
<tr><td>1</td><td>ಅಪೆಂಡಿಕ್ಸ್ – ರಸ್ತೆ ಮತ್ತು ಸೇತುವೆ</td><td>5967.00</td></tr>
<tr><td>2</td><td>ಅಂಬೇಡ್ಕರ್ ಹಾಸ್ಟೆಲ್ ಹಾಗೂ ಕ್ರೈಸ್ ವಸತಿ ಶಾಲೆ</td><td>830.00</td></tr>
<tr><td>3</td><td>ನಬಾರ್ಡ್ – 28</td><td>375.00</td></tr>
<tr><td></td><td>ಒಟ್ಟು</td><td>7172.00</td></tr>
</table>
ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಅನುಬಂಧ-1ರಲ್ಲಿ ಒದಗಿಸಿದೆ.</td></tr>
<tr><td>ಆ)</td><td>ಆ ನಂತರ, ಅನುಮೋದನೆ ನೀಡಲಾಗಿದ್ದ ಕಾಮಗಾರಿಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ತಡೆಹಿಡಿಯಲಾಗಿದೆ: (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)</td><td>ಸದರಿ ಕಾಮಗಾರಿಗಳ ಪೈಕಿ ರೂ.1578.41 ಕೋಟಿ ಮೊತ್ತದ ಕಾಮಗಾರಿಗಳನ್ನು ತಡೆಹಿಡಿಯಲಾಗಿತ್ತು. ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಅನುಬಂಧ-2ರಲ್ಲಿ ಒದಗಿಸಿದೆ.</td></tr>
<tr><td>ಇ)</td><td>2023, ಮೇ 20ರ ನಂತದ ಸರ್ಕಾರ ತಡೆಹಿಡಿಯಲಾಗಿದ್ದ ಕಾಮಗಾರಿಗಳ ಪೈಕಿ ಯಾವ ಯಾವ ಕಾಮಗಾರಿಗಳಿಗೆ ಪುನರ್ ಅನುಮೋದನೆ ನೀಡಲಾಗಿದೆ: ಹಾಗೂ ಪುನರ್ ಅನುಮೋದನೆ ನೀಡಲಾದ ಕಾಮಗಾರಿಗಳಿಗೆ ಯಾವ ಯಾವ ಲೆಕ್ಕಶೀರ್ಷಿಕೆಗಳಡಿ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ: (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)</td><td>ತಡೆಹಿಡಿಯಲಾಗಿದ್ದ ಕಾಮಗಾರಿಗಳ ಪೈಕಿ ರೂ.1100.41 ಕೋಟಿ ಮೊತ್ತದ ಕಾಮಗಾರಿಗಳನ್ನು ಮುಂದುವರೆಸಲು ಹಾಗೂ ಪ್ರಾರಂಭವಾಗದೇ ಇದ್ದ ರೂ.477.99 ಕೋಟಿ ಮೊತ್ತದ ಕಾಮಗಾರಿಗಳ ಬದಲಾಗಿ ಮಾನ್ಯ ಶಾಸಕರ ಕೋರಿಕೆ ಮೇರೆಗೆ ಬದಲೀ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಅನುಮೋದನೆ ನೀಡಲಾಗಿದ್ದು, ಸದರಿ ಕಾಮಗಾರಿಗಳಿಗೆ ಮಂಜೂರು ಮಾಡಲಾದ ಮೊತ್ತದ ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಅನುಬಂಧ-3ರಲ್ಲಿ ಒದಗಿಸಿದೆ.</td></tr>
</table>

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಈ) | 2023-2024ನೇ ಸಾಲಿನಲ್ಲಿ ರಾಜ್ಯ ಸರ್ಕಾರ ಯಾವ ಯಾವ ಲೆಕ್ಕಶೀರ್ಷಿಕೆಗಳಡಿ ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಿದೆ? (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು) | 2023-24ನೇ ಸಾಲಿನಲ್ಲಿ ವಿವಿಧ ಲೆಕ್ಕಶೀರ್ಷಿಕೆಗಳಡಿ ಬಿಡುಗಡೆ ಮಾಡಿದ ಅನುದಾನದ ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಅನುಬಂಧ-4ರಲ್ಲಿ ಒದಗಿಸಿದೆ. |

**ಲೋಇ/648/ಐಎಫ್ಎ/2023**

**(ಸತೀಶ ಜಾರಕಿಹೊಳಿ)**
**ಲೋಕೋಪಯೋಗಿ ಸಚಿವರು**